# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019-20ನೇ ಸಾಲಿನ "ಲಲಿತಕಲಾ / ರಂಗಭೂಮಿ ವಿಭಾಗ"ದ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 45 ಕಸಧ 2020, ದಿ:20-01-2020.
2.ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ: ಡಿಕೆಸಿ:11029/1/2019-20, ದಿನಾಂಕ:04-03-2020.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನ ಲಲಿತಕಲಾ / ರಂಗಭೂಮಿ ವಿಭಾಗದ ಪ್ರಶಸ್ತಿಗೆ (ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿ, ಜಕಣಾಚಾರಿ ಪ್ರಶಸ್ತಿ, ಬಿ.ವಿ.ಕಾರಂತ ಪ್ರಶಸ್ತಿ, ಡಾ:ಗುಬ್ಬಿ ವೀರಣ್ಣ ಪ್ರಶಸ್ತಿ, ಜಾನಪದಶ್ರೀ ಪ್ರಶಸ್ತಿ) ಅರ್ಹರನ್ನು ಆಯ್ಕೆ ಮಾಡಲು ಶ್ರೀ ಟಿ.ಎಸ್. ನಾಗಾಭರಣ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ಆಯ್ಕೆ ಸಮಿತಿಯು 2019-20ನೇ ಸಾಲಿನ ಲಲಿತಕಲಾ / ರಂಗಭೂಮಿ ವಿಭಾಗದ ಪ್ರಶಸ್ತಿಗೆ (ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿ, ಜಕಣಾಚಾರಿ ಪ್ರಶಸ್ತಿ, ಬಿ.ವಿ.ಕಾರಂತ ಪ್ರಶಸ್ತಿ, ಡಾ:ಗುಬ್ಬಿ ವೀರಣ್ಣ ಪ್ರಶಸ್ತಿ, ಜಾನಪದಶ್ರೀ ಪ್ರಶಸ್ತಿ) ಸಂಬಂಧಿಸಿದಂತೆ, ಆಯ್ಕೆ ಸಮಿತಿಯ ಸಭೆಯಲ್ಲಿ ಲಲಿತಕಲಾ / ರಂಗಭೂಮಿ ಪ್ರಶಸ್ತಿಗೆ ಸಮಿತಿಯು ಒಮ್ಮತದಿಂದ ಆಯ್ಕೆ ಮಾಡಿರುವ ಅರ್ಹ ಕಲಾವಿದರ ಪಟ್ಟಿಯನ್ನು ಲಗತ್ತಿಸಿ ಕಳುಹಿಸಿರುವ ವರದಿಯನ್ನು ಒಪ್ಪಿ, ಈ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 126 ಕಸಧ 2020, ಬೆಂಗಳೂರು, ದಿನಾಂಕ:21-03-2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯ್ಕೆ ಸಮಿತಿಯ ಶಿಫಾರಸ್ಸನ್ನು ಅಂಗೀಕರಿಸಿ 2019-20ನೇ ಸಾಲಿನ ಲಲಿತಕಲಾ / ರಂಗಭೂಮಿ ವಿಭಾಗದ ಪ್ರಶಸ್ತಿಗೆ (ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿ, ಜಕಣಾಚಾರಿ ಪ್ರಶಸ್ತಿ, ಬಿ.ವಿ.ಕಾರಂತ ಪ್ರಶಸ್ತಿ, ಡಾ:ಗುಬ್ಬಿ ವೀರಣ್ಣ ಪ್ರಶಸ್ತಿ, ಜಾನಪದಶ್ರೀ ಪ್ರಶಸ್ತಿ)ಗಳಿಗೆ ಈ ಕೆಳಕಂಡ ಕಲಾವಿದರುಗಳಿಗೆ ನೀಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ.ಸಂ. | ಪ್ರಶಸ್ತಿ ಹೆಸರು | ಸಾಧಕರ ಹೆಸರು |
|---|---|---|
| 1. | ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿ | ಶ್ರೀ ಜಿ.ಸು.ಕೃಷ್ಣಶೆಟ್ಟಿ |
| 2. | ಜಕಣಾಚಾರಿ ಪ್ರಶಸ್ತಿ | ಶ್ರೀ ಬಿ.ಎಸ್.ಯೋಗಿರಾಜ |
| 3. | ಬಿ.ವಿ.ಕಾರಂತ ಪ್ರಶಸ್ತಿ | ಶ್ರೀ ಹೆಚ್.ವಿ.ವೆಂಕಟಸುಬ್ಬಯ್ಯ |
| 4. | ಡಾ:ಗುಬ್ಬಿ ವೀರಣ್ಣ ಪ್ರಶಸ್ತಿ | ಶ್ರೀ ಮದಿರೆ ಮರಿಸ್ವಾಮಿ |
| 5. | ಜಾನಪದಶ್ರೀ ಪ್ರಶಸ್ತಿ | ಶ್ರೀ ಬಿ. ಟಾಕಪ್ಪ ಕಣ್ಣೂರು – ವಾದನ<br>ಶ್ರೀಮತಿ ಭೀಮವ್ವ ದೊಡ್ಡಬಾಳವ್ವ ಶಿಳ್ಳೆಕ್ಯಾತರ-ಗಾಯನ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11688
23/3/2020

Malathi
21/3/20
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
ಸಂಸ್ಕೃತಿ

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಪ್ರಶಸ್ತಿ ವಿಜೇತರಿಗೆ (ನಿರ್ದೇಶಕರ ಮುಖಾಂತರ)
4. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.